**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ನಾಗರಾಜು ಇವರು ದಿನಾಂಕ:12/08/2025 ರಂದು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ "ಅರಶಿನಕುಂಟೆ ಬಿನ್ನಮಂಗಲದ ಕೆರೆಗಳಿಗೆ ಬೇಕಿದೆ ಕಾಯಕಲ್ಪ" ಎಂದು ಸಂಯುಕ್ತ ಕರ್ನಾಟಕ ದಿನ ಪತ್ರಿಕೆಯಲ್ಲಿ ವರದಿಯಾಗಿರುವ ಕುರಿತು ಪ್ರಸ್ತಾಪಿಸಿರುವ ಬಗ್ಗೆ ಸರ್ಕಾರದ ಹೇಳಿಕೆ.**

*****

- ಅರಿಶಿನಕುಂಟೆ, ಬಿನ್ನಮಂಗಲದ ಕೆರೆಗಳು ಪ್ರತ್ಯೇಕವಾಗಿರದೆ ಒಂದೇ ಆಗಿರುತ್ತದೆ. ಮಾನ್ಯ ಶಾಸಕರು, ನೆಲಮಂಗಲ ವಿಧಾನಸಭಾ ಕ್ಷೇತ್ರ ರವರು ಬಿನ್ನಮಂಗಲ ಕೆರೆ ಅಭಿವೃದ್ಧಿ, ಪುನಶ್ಚೇತನ ಮತ್ತು ಸೌಂದರ್ಯೀಕರಣ ಕಾಮಗಾರಿಗಳ ಹಂತ-1ನ್ನು ರೂ. 950.00 ಲಕ್ಷಗಳಲ್ಲಿ ಮತ್ತು ಹಂತ -2ನ್ನು ರೂ. 850.00 ಲಕ್ಷಗಳಲ್ಲಿ ಕೈಗೊಳ್ಳಲು ಸದಸ್ಯ ಕಾರ್ಯದರ್ಶಿ, ನೆಲಮಂಗಲ ಯೋಜನಾ ಪ್ರಾಧಿಕಾರ ಇವರಿಗೆ ಸೂಚಿಸಿರುವ ಹಿನ್ನೆಲೆಯಲ್ಲಿ, ದಿನಾಂಕ:19-12-2024 ರಂದು ನಡೆದ ನೆಲಮಂಗಲ ಯೋಜನಾ ಪ್ರಾಧಿಕಾರದ 121 ನೇ ಸಭೆಯ ವಿಷಯ ಸಂಖ್ಯೆ: 121.14.4 ರಲ್ಲಿ ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ನಿರ್ಣಯಿಸಲಾಗಿರುತ್ತದೆ.

- ಬಿನ್ನಮಂಗಲ ಕೆರೆಯು ನಗರಸಭೆ, ನೆಲಮಂಗಲ ರವರ ಸುಪರ್ಧಿಗೆ ಒಳಪಟ್ಟಿರುವ ಕಾರಣ ಪೌರಾಯುಕ್ತರು, ನಗರಸಭೆ, ನೆಲಮಂಗಲ ರವರು ದಿನಾಂಕ:26-05-2025 ರಂದು ಸದರಿ ಕೆರೆ ಅಭಿವೃದ್ಧಿ ಕಾಮಗಾರಿಗಳ ವಿಸ್ತೃತ ಯೋಜನಾ ವರದಿ ಮತ್ತು ಅಂದಾಜು ಪಟ್ಟಿಯನ್ನು ಸದಸ್ಯ ಕಾರ್ಯದರ್ಶಿ, ನೆಲಮಂಗಲ ಯೋಜನಾ ಪ್ರಾಧಿಕಾರ ರವರಿಗೆ ಸಲ್ಲಿಸಿದ್ದು, ನೆಲಮಂಗಲ ಯೋಜನಾ ಪ್ರಾಧಿಕಾರವು ಸದರಿ ಕೆರೆಯ ಅಭಿವೃದ್ಧಿ ಕಾಮಗಾರಿಯ ಹಂತ-1 ರ ವಿಸ್ತೃತ ಯೋಜನಾ ವರದಿಯನ್ನು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ರವರಿಗೆ ದಿನಾಂಕ:28-05-2025 ರಂದು ಸಲ್ಲಿಸಿರುತ್ತಾರೆ.

- ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರವು ಕೆರೆಗಳ ಅಭಿವೃದ್ಧಿ ಪ್ರಸ್ತಾವನೆಗಳಿಗೆ ತಾಂತ್ರಿಕ ತೆರವು ನೀಡಲು ಪರಿಶೀಲನಾ ಶುಲ್ಕ ರೂ. 4.75 ಲಕ್ಷಗಳನ್ನು ಪಾವತಿಸುವಂತೆ ದಿನಾಂಕ: 09-06-2025 ರ ಪತ್ರದಲ್ಲಿ ನೆಲಮಂಗಲ ಯೋಜನಾ ಪ್ರಾಧಿಕಾರವನ್ನು ಕೋರಿದ್ದು, ಪ್ರಾಧಿಕಾರದ ವತಿಯಿಂದ ಪರಿಶೀಲನಾ ಶುಲ್ಕವನ್ನು ಪಾವತಿಸುವ ಕುರಿತು ಕ್ರಮವಹಿಸಲಾಗುತ್ತಿದೆ.

- ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರವು ವಿಸ್ತೃತ ಯೋಜನಾ ವರದಿಗೆ ತಾಂತ್ರಿಕ ತೆರವು ನೀಡಿದ ನಂತರದಲ್ಲಿ ಬಿನ್ನಮಂಗಲ ಕೆರೆಯ ಅಭಿವೃದ್ಧಿ (ಹಂತ-1) ಕಾಮಗಾರಿಯನ್ನು ಕೈಗೊಳ್ಳಲು ನಿಯಮಾನುಸಾರ ಕ್ರಮವಹಿಸಲಾಗುವುದು.

*****

**ಸಂಖ್ಯೆ: ನಅಇ 475 ಬಿಎಂಆರ್ 2025**

**(ಡಿ.ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿ.**